# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಶ್ವೇಶ್ವರಯ್ಯ ನಾಲಾ ಜಾಲದ 2ನೇ ಹಂತದ (ಪ್ಯಾಕೇಜ್-1 ರಿಂದ 4 ವರೆಗೆ) ಆಧುನೀಕರಣ ಕಾಮಗಾರಿಗಳ ಡಿ.ಪಿ.ಆರ್ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

*ಓದಲಾಗಿದೆ :-*

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿ/ತಾಂತ್ರಿಕ-3/ಸ.ಇಂ-3/ವಿ.ಸಿ.ಡಿ/198 ಭಾಗ-2/2017-18/3844, ದಿನಾಂಕ:09-02-2018 ಮತ್ತು ಪತ್ರ ಸಂಖ್ಯೆ:1586, ದಿನಾಂಕ:29-08-2018.

*ಪ್ರಸ್ತಾವನೆ :-*

ಮೇಲೆ ಓದಲಾದ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಕನ್ನಂಬಾಡಿಯಲ್ಲಿ ಕಾವೇರಿ ನದಿಗೆ ಅಡ್ಡಲಾಗಿ ಕೃಷ್ಣರಾಜಸಾಗರ ಅಣೆಕಟ್ಟೆಯನ್ನು 1911ನೇ ಇಸವಿಯಲ್ಲಿ ಪ್ರಾರಂಭಿಸಿ 1931ನೇ ಇಸವಿಯಲ್ಲಿ ಪೂರ್ಣಗೊಳಿಸಲಾಗಿದ್ದು, ಸದರಿ ಅಣೆಕಟ್ಟೆಯಿಂದ ಎಡ ಭಾಗದಲ್ಲಿ ನಿರ್ಮಿಸಲಾಗಿರುವ ವಿಶ್ವೇಶ್ವರಯ್ಯ ನಾಲೆಯಿಂದ ಮಂಡ್ಯ ಮತ್ತು ಮೈಸೂರು ಜಿಲ್ಲೆಯ ಅಚ್ಚುಕಟ್ಟು ಪ್ರದೇಶಗಳಿಗೆ ಪೂರ್ಣ ಪ್ರಮಾಣದ ನೀರಾವರಿ ಸೌಲಭ್ಯವನ್ನು ಒದಗಿಸಲಾಗುತ್ತಿರುತ್ತದೆ ಎಂದು ವರದಿ ಮಾಡಿರುತ್ತಾರೆ.

2. 2012-13ನೇ ಸಾಲಿನಲ್ಲಿ ವಿಶ್ವೇಶ್ವರಯ್ಯ ನಾಲಾ ಜಾಲದ ಮುಖ್ಯ ನಾಲೆ, ಶಾಖಾ ನಾಲೆಗಳು, ಉಪ ಶಾಖೆಗಳು ಮತ್ತು ವಿತರಣಾ ನಾಲೆಗಳ ಒಟ್ಟು ಉದ್ದ 1523.30 ಕಿ.ಮೀ ಗಳಾಗಿದ್ದು, ಇದರ ಪೈಕಿ ಹಿಂದಿನ ಆಧುನೀಕರಣ ಯೋಜನೆಯ ಅಡಿಯಲ್ಲಿ ಮುಖ್ಯ ನಾಲೆ ಮತ್ತು ಆಯ್ದ ಕೆಲವು ಶಾಖಾ ನಾಲೆಗಳ ಒಟ್ಟು 522.50 ಕಿ.ಮೀ ಉದ್ದದ ಅಭಿವೃದ್ಧಿ ಹಾಗೂ ಸೂಕ್ಷ್ಮ ಸ್ಥಳಗಳಲ್ಲಿ ಕೆ.ಆರ್.ಎಸ್ ಆಧುನೀಕರಣದ ಅಡಿಯಲ್ಲಿ ನಿರ್ವಹಿಸಿರುವ ಲೈನಿಂಗ್ ಹೊರತುಪಡಿಸಿ, ಉಳಿದಂತೆ ಸುಮಾರು 1000.80 ಕಿ.ಮೀ ಉದ್ದದ ವಿಶ್ವೇಶ್ವರಯ್ಯ ನಾಲಾ ಜಾಲದ ಪೈಕಿ 452 ಕಿ.ಮೀ ಉದ್ದದ ನಾಲಾ ಜಾಲವನ್ನು ಆದ್ಯತೆಯ ಮೇರೆಗೆ ಅಭಿವೃದ್ಧಿಗೊಳಿಸಲು ರೂ.330.00 ಕೋಟಿಗಳ ವಿಶ್ವೇಶ್ವರಯ್ಯ ನಾಲಾ ಜಾಲದ ಅಭಿವೃದ್ಧಿ ಕಾಮಗಾರಿಯ ವಿಸ್ತೃತ ಯೋಜನಾ ವರದಿಗೆ ಸರ್ಕಾರದ ಆದೇಶ ಸಂಖ್ಯೆ:ಜಸಂಇ 68 ಎಂಎಂಕೆ 2012, ದಿನಾಂಕ:24-08-2012 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿರುತ್ತದೆ. ಅದರನ್ವಯ, ಸದರಿ ಕಾಮಗಾರಿಗಳನ್ನು ಒಟ್ಟು 5 ಪ್ಯಾಕೇಜ್‌ಗಳಾಗಿ ವಿಂಗಡಿಸಿ, ಕಾಮಗಾರಿ ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿರುತ್ತದೆ.

3. ವಿಶ್ವೇಶ್ವರಯ್ಯ ನಾಲಾ ಜಾಲದ ಮುಖೇನ ಮಂಡ್ಯ ಮತ್ತು ಮೈಸೂರು ಜಿಲ್ಲೆಯ ಒಟ್ಟು 2,01,250 ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಒದಗಿಸಲಾಗುತ್ತಿದ್ದು, ನಾಲಾ ಜಾಲದ ಮುಖ್ಯ ನಾಲೆ ಮುಖೇನ ಒಟ್ಟು 3,060 ಕ್ಯೂಸೆಕ್ಸ್ ನೀರನ್ನು ಹರಿಸಲಾಗುತ್ತಿದ್ದು, ನಾಲಾ ಜಾಲಾವಲ್ಲಿ ಬರುವ ಅಚ್ಚುಕಟ್ಟು ಪ್ರದೇಶವು ವಿಸ್ತಾರಗೊಂಡಿದ್ದು, ಮುಖ್ಯ ನಾಲೆ ಮತ್ತು ಶಾಖಾ ನಾಲೆಗಳು ನೀರಿನ ಹೆಚ್ಚುವರಿ ಬೇಡಿಕೆಯಿಂದಾಗಿ ನೀರನ್ನು ಸಾಗಿಸುವ ಸಾಮರ್ಥ್ಯವನ್ನು ಕಳೆದುಕೊಂಡಿದ್ದು, ನಾಲಾ ಜಾಲದ ಆಧುನೀಕರಣ ಕಾಮಗಾರಿಯನ್ನು ತ್ವರಿತವಾಗಿ ಕೈಗೆತ್ತಿಕೊಳ್ಳುವುದು ಸೂಕ್ತವೆಂದು ವರದಿ ಮಾಡಿರುತ್ತಾರೆ.

4. ಪ್ರತಿ ಪ್ಯಾಕೇಜ್‌ಗಳಡಿ ಬರುವ ಅಚ್ಚುಕಟ್ಟು ಪ್ರದೇಶಕ್ಕೆ ಸಮರ್ಪಕವಾಗಿ ನೀರನ್ನು ಮಿತವ್ಯಯಕಾರಿಯಾಗಿ ಬಳಕೆ ಮಾಡಿಕೊಳ್ಳುವುದು ಹಾಗೂ ನಾಲಾ ಜಾಲವನ್ನು ಸದೃಡಗೊಳಿಸುವುದು ಹಾಗೂ ನೀರಿನ ನಿರ್ವಹಣೆಯನ್ನು ಹಂಚಿಕೆ ಮಿತಿಯೊಳಗೆ ನಿರ್ವಹಣೆ ಮಾಡುವ ಸಲುವಾಗಿ ಈ ಹಿಂದಿನ ಆಧುನೀಕರಣ ಯೋಜನೆಯ ಅಡಿಯಲ್ಲಿ ಮುಖ್ಯ ನಾಲೆ ಮತ್ತು ಆಯ್ದ ಕೆಲವು ಶಾಖಾ ನಾಲೆಗಳಲ್ಲಿ ಕೈಗೆತ್ತಿಕೊಂಡಿರುವ ಅಭಿವೃದ್ಧಿ ಕಾಮಗಾರಿಗಳನ್ನು ಹೊರತುಪಡಿಸಿ, ಉಳಿದ ನಾಲಾ ಜಾಲದ ಪ್ರತಿ ಹಂತದ ಗುಣಮಟ್ಟವನ್ನು ಕಾಯ್ದುಕೊಳ್ಳುವ ಸಲುವಾಗಿ ಬಾಕಿ ಉಳಿದಿರುವ ಮುಖ್ಯ ನಾಲೆ, ವಿತರಣಾ ನಾಲೆಗಳು, ಸುರಂಗ ಮಾರ್ಗ, ದುಸ್ಥಿತಿಯಲ್ಲಿರುವ ಅಡ್ಡಮೋರಿ ಕಾಮಗಾರಿಗಳು ಮತ್ತು ಇತರೆ ಪ್ರಮುಖ ಕಾಮಗಾರಿಗಳನ್ನು ಒಳಗೊಂಡಂತೆ ಎಲ್ಲಾ ರೀತಿಯ ನೀರಿನ ಉಳಿತಾಯವನ್ನು ಮಾಡುವ ಸಲುವಾಗಿ ನಾಲೆಗಳ ಸಮಗ್ರ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳುವುದು ತೀರಾ ಅನಿವಾರ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ವಿಶ್ವೇಶ್ವರಯ್ಯ ನಾಲಾ ಜಾಲಾದ 2ನೇ ಹಂತದ ಆಧುನೀಕರಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಸಲುವಾಗಿ ಸರ್ವೆ ಕಾರ್ಯ ಕೈಗೊಂಡು, ವಿವರವಾದ ಯೋಜನಾ

ವರದಿಯನ್ನು ತಯಾರಿಸಲಾಗಿರುತ್ತದೆ. ಸದರಿ ಪ್ರಸ್ತಾವನೆಯು ದಿನಾಂಕ:21-11-2017 ರಂದು ನಡೆದ ಕಾವೇರಿ ನೀರಾವರಿ ನಿಗಮದ 60ನೇ ಮಂಡಳಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

5. ಈ ಹಿನ್ನೆಲೆಯಲ್ಲಿ, ವಿಶ್ವೇಶ್ವರಯ್ಯ ನಾಲಾ ಜಾಲದ 2ನೇ ಹಂತದ (ಪ್ಯಾಕೇಜ್-1 ರಿಂದ 4 ವರೆಗೆ) ಆಧುನೀಕರಣ ಕಾಮಗಾರಿಗಳ ರೂ.522.37 ಕೋಟಿಗಳ ಮೊತ್ತದ ಡಿ.ಪಿ.ಆರ್ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ರವರು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

6. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

## ಸರ್ಕಾರಿ ಆದೇಶ ಸಂಖ್ಯೆ : ಜಸಂಇ 29 ಎಂಎಂಕೆ 2018, ಬೆಂಗಳೂರು, ದಿನಾಂಕ : 07-03-2019

ವಿಶ್ವೇಶ್ವರಯ್ಯ ನಾಲಾ ಜಾಲದ 2ನೇ ಹಂತದ ನಾಲ್ಕು ಪ್ಯಾಕೇಜ್‌ಗಳಾದ (1) ವಿಶ್ವೇಶ್ವರಯ್ಯ ನಾಲಾ ಜಾಲದ ಮುಖ್ಯ ಕಾಲುವೆ ಮತ್ತು ಅದರ ವಿತರಣಾ ಕಾಲುವೆಗಳು, ಪಿಕ್‌ಅಪ್ ನಾಲೆಗಳು ಹಾಗೂ ಎಲ್.ಬಿ.ಎಲ್.ಎಲ್. ವಿತರಣಾ ನಾಲೆಗಳ ಆಧುನೀಕರಣ ಕಾಮಗಾರಿ, (2) ವಿಶ್ವೇಶ್ವರಯ್ಯ ನಾಲಾ ಜಾಲದಡಿ ಆರ್.ಬಿ.ಎಲ್.ಎಲ್. ವಿತರಣಾ ನಾಲೆಗಳ ಆಧುನೀಕರಣ ಕಾಮಗಾರಿ, (3) ವಿಶ್ವೇಶ್ವರಯ್ಯ ನಾಲಾ ಜಾಲದಡಿ ಸಂಪರ್ಕ ನಾಲೆಯ ಮುಖ್ಯ ನಾಲೆ ಮತ್ತು ಅದರಡಿ ಬರುವ ವಿತರಣಾ ನಾಲೆಗಳ ಆಧುನೀಕರಣ ಕಾಮಗಾರಿ ; ಹಾಗೂ (4) ಹಳೆ ಮದ್ದೂರು ಶಾಖಾ ನಾಲೆಯ ವಿತರಣಾ ನಾಲೆಗಳ ಮತ್ತು ಪಿಕಪ್‌ಗಳ ಅಭಿವೃದ್ಧಿ ಕಾಮಗಾರಿಗಳ ಒಟ್ಟಾರೆ ರೂ.522.37 ಕೋಟಿ (ರೂಪಾಯಿ ಐನೂರ ಇಪ್ಪತ್ತೆರಡು ಕೋಟಿ ಮೂವತ್ತೇಳು ಲಕ್ಷಗಳು ಮಾತ್ರ) ಗಳ ವಿವರವಾದ ಯೋಜನಾ ವರದಿಗೆ 2 ಹಂತದಲ್ಲಿ ಕೈಗೊಳ್ಳಲು ತಾತ್ವಿಕ ಆಡಳಿತಾತ್ಮಕ ಅನುಮೋದನೆಯನ್ನು ಹಾಗೂ ಮೊದಲನೇ ಹಂತದ ಕಾಮಗಾರಿಗಳನ್ನು ರೂ.300.00 ಕೋಟಿಗಳ ವೆಚ್ಚದಲ್ಲಿ ಟೆಂಡರ್ ಮುಖಾಂತರ ಕೈಗೊಳ್ಳಲು ಸರ್ಕಾರದ ಅನುಮೋದನೆ ನೀಡಲಾಗಿದೆ.

2. ಎರಡನೇ ಹಂತದ ಕಾಮಗಾರಿಗಳನ್ನು ಕೈಗೊಳ್ಳುವ ಬಗ್ಗೆ ಪ್ರತ್ಯೇಕ ಸರ್ಕಾರಿ ಆದೇಶವನ್ನು ಹೊರಡಿಸಲಾಗುವುದು.

3. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 163 ಆಕೋ-1/2019, ದಿನಾಂಕ:28-02-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

07/03/19

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಇವರಿಗೆ :-

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ನೀರಾವರಿ (ದಕ್ಷಿಣ) ವಲಯ, ಮೈಸೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.